ಓ ಎಸ್**: 254/2009** ಡಿ . ಡಬ್ಲ್ಯೂ-1

ಸಾಕ್ಷಿಯನ್ನು ದಿಃ **18.09.2021** ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

<u>ಮುಖ್ಯ ವಿಚಾರಣೆಃ ಪ್ರತಿವಾದಿ ಪರ ವಕೀಲರಾದ ಶ್ರೀ ಬಿ ಎಂ ಎಸ್ ವಕೀಲರಿಂದಃ</u>

ನಾಗರತ್ನಮ್ಮ ಕೋಂ ಬಸವರಾಜು, ವಯಸ್ಸು **70** ವರ್ಷ, ನಾನು ಈ ದಾವೆಯಲ್ಲಿ **1** ನೇ ಪ್ರತಿವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಹೇಳಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆ. ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದ್ದೇ ಆಗಿರುತ್ತದೆ. ಈ ದಾವೆಯನ್ನು ವಜಾ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

ದಿನಾಂಕ **09.10.1978** ರ ನೋಂದಾಯಿತ ಕ್ರಯಪತ್ರದ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ.**1** ಎಂದು, ದಿನಾಂಕ **22.05.1982** ರ ಹಕ್ಕುಪತ್ರದ ಮೂಲ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಡಿ.**2** ಎಂದು, **1999-2000** ನೇ ಇಸವಿಯ ಡಿಮಾಂಡ್ ರಿಜಿಸ್ಟರ್ ನ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ.**3** ಎಂದು, ಕೆ ಎಂ ಎಫ್ **24** ರ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ.**4** ಎಂದು, ಎರಡು ಕಂದಾಯ ರಶೀದಿಗಳನ್ನು ನಿಡಿ.**5** ಮತ್ತು ನಿಡಿ.**6** ಎಂದು ಗುರುತಿಸಲಾಯಿತು.

<u>ಪಾಟೀ ಸವಾಲಿಗೆ ಮುಂದೂಡಲಾಯಿತು.</u>

(ತೆರೆದ ನ್ಯಾಯಾಲಯದಲ್ಲಿ ಈ ಮೇಲೆ ಸಾಕ್ಷಿ ಹೇಳಿದ ಸಾಕ್ಷ್ಯವನ್ನು ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿದ ನಂತರ, ಓದಿ ಹೇಳಿದ ಮೇರೆಗೆ ಸಾಕ್ಷಿ ಸರಿ ಇದೆ ಎಂದು ಒಪ್ಪಿತಮ್ಮ ಸಹಿ ಮಾಡಿರುತ್ತಾರೆ.)

ಓ ಹೇ ಕೇ ಸ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಲಯ ಮತ್ತು
ಜೆ.ಎಂ.ಎಫ್.ಸಿ. ತಿ.ನರಸೀಪುರ